ಭೂಸ್ವಾಧೀನ ಮೊತ್ತವು ರೂ. 14.92 ಕೋಟಿಗಳಿಂದ ರೂ. 29.45 ಕೋಟಿಗಳಿಗೆ ಪರಾಮರ್ಶಿಸಲಾಗಿ ಭೂಸ್ವಾದೀನ ಠೇವಣಿ ಇಟ್ಟ ಮೊತ್ತಕ್ಕೆ ಮಿತಿಗೊಳಿಸಿ ಲಭ್ಯವಿರುವ 76 ಎಕರೆಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ.

ಸರ್ಕಾರಿ ಶಾಲೆಗೆ ಸ್ವಂತ ಕಟ್ಟಡ

135 : (283)

ಶ್ರೀ ನೆ.ಲ. ನರೇಂದ್ರ ಬಾಬು (ಮಹಾಲಕ್ಷ್ಮಿ ಬಡಾವಣೆ)

ಅ. ಮಹಾಲಕ್ಷ್ಮಿ ಬಡಾವಣೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಮಹಾತ್ಮ ಗಾಂಧಿ ನಗರದಲ್ಲಿರುವ ಸರ್ಕಾರಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಿಸಲು ನಿವೇಶನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಶಾಲೆಯ ಪಕ್ಕದಲ್ಲೇ ಇರುವ ಖಾಸಗಿ ಜಾಗವನ್ನು ವಶಪಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಸರ್ಕಾರಿ ಶಾಲೆಗಳಲ್ಲಿ ದಿನೇ ದಿನೇ ಮಕ್ಕಳ ಸಂಖ್ಯೆ ಕಡಿಮೆಯಾಗಲು ಕಾರಣಗಳೇನು, ಖಾಸಗೀ ಶಾಲೆಗಳಲ್ಲಿ ಹೆಚ್ಚಾಗಲು ಕಾರಣವೇನು;

ಈ) ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಇದೆ.

ಆ) ಈಗಾಗಲೇ ಕ್ರಮ ವಹಿಸಲಾಗಿದೆ.

ಇ) ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ಗುಣಮಟ್ಟ ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ. ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗಿರುವುದಿಲ್ಲ,

ಬೆಂಗಳೂರು ನಗರ ಮೆಟ್ರೋಪಾಲಿಟಿನ್ ಸಿಟಿಯಾಗಿರುವುದರಿಂದ ಸಹಜವಾಗಿ ವಲಸೆ ಜನಸಂಖ್ಯೆಯನ್ನು ಹೊಂದಿರುತ್ತದೆ. ಇದರಿಂದಾಗಿ ಮಕ್ಕಳ ದಾಖಲಾತಿ ಮತ್ತು ಹಾಜರಾತಿಗಳಲ್ಲಿ ಏರಿಳಿತ ಇದ್ದು, ಖಾಸಗಿ ಶಾಲೆಗಳಲ್ಲಿ ದಾಖಲಾತಿ ಪ್ರಕ್ರಿಯೆ ಪಾಲಕರ ಆಯ್ಕೆಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ವಾಸ್ತವಾಂಶ ಹೀಗಿದ್ದರೂ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಯ ಸಮತೋಲನವನ್ನು ಕಾಯ್ದುಕೊಳ್ಳಲಾಗಿದೆ.

ಈ) ಕ್ರಮ ಕೈಗೊಳ್ಳಲಾಗಿದೆ.